ಈ) ಈ ರೀತಿಯ ಯಾವುದೇ ಪ್ರಸ್ತಾಪನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.

ಉ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ಪ್ರಾಣಿಗಳಿಗೆ ನಡೆಸಿದ ಚಿಕಿತ್ಸೆಗೆ ಸರಕಾರದಿಂದ ಶುಲ್ಕ ನಿಗದಿ ಪಡಿಸುವುದರ ಬಗ್ಗೆ

4196 (4910) : ಶ್ರೀ ಯು.ಆರ್. ಸಭಾಪತಿ (ಉಡುಪಿ) ಮಾನ್ಯ ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಪ್ರಾಣಿಗಳಿಗೆ ಪಶುವೈದ್ಯರುಗಳು ನಡೆಸುವ ಚಿಕಿತ್ಸೆ ಶಸ್ತ್ರ ಚಿಕಿತ್ಸೆ ಹಾಗೂ ಔಷಧಗಳಿಗೆ ಶುಲ್ಕ ವಿಧಿಸಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಅದರ ವಿವರಗಳೇನು?

ಆ) ಈ ಶುಲ್ಕ ನಿಗದಿಪಡಿಸಿರುವ ಔಚಿತ್ಯವೇನು?

ಇ) ಮನುಷ್ಯರಿಗೆ ಸರಕಾರ ಉಚಿತ ಚಿಕಿತ್ಸೆ ನೀಡುತ್ತಿರುವಾಗ ಪ್ರಾಣಿಗಳ ಚಿಕಿತ್ಸೆಗೆ ಶುಲ್ಕ ನಿಗದಿಪಡಿಸಿರುವುದು ಸರಿಯೇ:

ಈ) ಸರಕಾರದ ಈ ನಿಲುವಿಗೆ ಸಾರ್ವತ್ರಿಕವಾಗಿ ಪ್ರತಿಭಟನೆ ಬಂದಿರುವುದು ಗಮನಕ್ಕೆ ಬಂದಿದೆಯೇ:

ಶ್ರೀ ಎಂ. ಮಹದೇವ್ (ಪಶುಸಂಗೋಪನೆ ಮತ್ತು ಸಕ್ಕರೆ ಸಚಿವರು)

ಅ) ಸರ್ಕಾರಿ ಆದೇಶ ಸಂಖ್ಯೆ: ಪಸಂಮೀ 57 ಪಪಾಯೋ 2003 ದಿನಾಂಕ: 21-7-2003ರಲ್ಲಿ ತಕ್ಷಣದಿಂದ ಜಾರಿಗೆ ಬರುವಂತೆ ಹಿಂದಕ್ಕೆ ಪಡೆಯಲಾಗಿದೆ.

ಆ) ಮೇಲೆ ವಿವರಿಸಿದಂತೆ ಹಿಂತೆಗೆದುಕೊಳ್ಳಲಾಗಿದೆ.

ಇ) ಉದ್ಭವಿಸುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ರಾಜ್ಯದ ಕಬ್ಬು ಬೆಳೆಗಾರರಿಗೆ ಸಕ್ಕರೆ ಕಾರ್ಖಾನೆಗಳಿಂದ ಬೆಳೆ ಮೊತ್ತ ಪಾವತಿಸುವುದು

4197 (4912) : ಶ್ರೀ ಡಿ.ವಿ. ಸದಾನಂದಗೌಡ (ಪುತ್ತೂರು) ಮಾನ್ಯ ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸರ್ಕಾರಿ, ಸಹಕಾರಿ ಮತು ಖಾಸಗಿ ಕ್ಷೇತ್ರದಲ್ಲಿರುವ ಸಕ್ಕರೆ ಕಾರ್ಖಾನೆಗಳು ಎಷ್ಟು ಮತ್ತು ಯಾವುವು? (ವಿವರ ಒದಗಿಸುವುದು);

ಆ) ಈ ಕಾರ್ಖಾನೆಗಳಿಂದ ಕಬ್ಬು ಬೆಳೆಗಾರರಿಗೆ ಪಾವತಿಸಬೇಕಾದ ಮೊತ್ತ ಎಷ್ಟು? (ಕಾರ್ಖಾನೆವಾರು ವಿವರ ಒದಗಿಸುವುದು);

ಇ) ಪ್ರಸ್ತುತ ಈ ಕಾರ್ಖಾನೆಗಳಲ್ಲಿ ದಾಸ್ತಾನು ಇರುವ ಸಕ್ಕರೆ ಪ್ರಮಾಣವೆಷ್ಟು? ಮತ್ತು ಅವುಗಳ ಮೌಲ್ಯ ಎಷ್ಟು: (ಕಾರ್ಖಾನೆವಾರು ವಿವರ ಒದಗಿಸುವುದು);

ಈ) ಈ ದಾಸ್ತಾನಿನಲ್ಲಿರುವ ಸಕ್ಕರೆಯನ್ನು ಹರಾಜು ಹಾಕಿ ಕಬ್ಬು ಬೆಳೆಗಾರರಿಗೆ ಪಾವತಿಸಲು ಬಾಕಿ ಇರುವ ಮೊತ್ತವನ್ನು ಮರುಪಾವತಿಸಲು ಕ್ರಮ ಕೈಗೊಳ್ಳುವುದೇ?

ಶ್ರೀ ಎಂ. ಮಹದೇವ್ (ಪಶು ಸಂಗೋಪನೆ ಹಾಗೂ ಸಕ್ಕರೆ ಸಚಿವರು)

ಅ) ರಾಜ್ಯದಲ್ಲಿ ಒಟ್ಟು 42 ಸಕ್ಕರೆ ಕಾರ್ಖಾನೆಗಳು ಕಾರ್ಯನಿರ್ವಹಿಸುತ್ತಿವೆ. ಇವುಗಳಲ್ಲಿ 20 ಸಹಕಾರಿ ಕ್ಷೇತ್ರದಲ್ಲಿ 2 ಸಾರ್ವಜನಿಕ ಕ್ಷೇತ್ರದಲ್ಲಿ, i ಜಂಟಿ ಕ್ಷೇತ್ರದಲ್ಲಿ ಹಾಗೂ 19 ಸಕ್ಕರೆ ಕಾರ್ಖಾನೆಗಳು ಖಾಸಗಿ ಕ್ಷೇತ್ರದಲ್ಲಿವೆ. ವಿವರ ಅನುಬಂಧ(1)ರಲ್ಲಿ ಕೊಡಲಾಗಿದೆ.